All India Radio: Bangalore
National Bulletin In Kannada
29.10.2025 7.35 a.m.
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

29.10.2025 7.35 a.m.

< > < > < > < >

ಮುಖ್ಯಾಂಶಗಳು

೧. ಆಂಧ್ರಪ್ರದೇಶದ ಕಾಕಿನಾಡ ಬಳಿ ಅಪ್ಪಳಿಸಿದ ಮೊಂಥಾ ಚಂಡಮಾರುತ; ಮುಂದಿನ ೬ ಗಂಟೆ ತೀವ್ರತೆ ಕಾಯ್ದುಕೊಳ್ಳುವ ಮುನ್ಸೂಚನೆ

೨. ಮುಂಬೈನಲ್ಲಿಂದು ಕಡಲ ನಾಯಕರ ಸಮಾವೇಶವನ್ನುದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಭಾಷಣ

೩. ಬ್ರುಸೆಲ್ಸ್ ಪ್ರವಾಸ ಸಂಪನ್ನಗೊಳಿಸಿದ ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್

೪. ೫ ಪಂದ್ಯಗಳ ಅಂತಾರಾಷ್ಟ್ರೀಯ ಟಿ೨೦ ಕ್ರಿಕೆಟ್ ಸರಣಿ; ಕ್ಯಾನ್‌ಬೆರಾದಲ್ಲಿಂದು ಭಾರತ-ಆಸ್ಟ್ರೇಲಿಯಾ ನಡುವೆ ಮೊದಲ ಪಂದ್ಯ

**********

ಬಂಗಾಳಕೊಲ್ಲಿಯಲ್ಲಿ ಕೆಲದಿನಗಳಿಂದ ಬಲಗೊಳ್ಳುತ್ತಿದ್ದ ಮೊಂಥಾ ಚಂಡಮಾರುತ, ನಿನ್ನೆ ಸಂಜೆ ೭ ಗಂಟೆಗೆ ಆಂಧ್ರಪ್ರದೇಶದ ಕಾಕಿನಾಡ ಬಳಿ ಅಪ್ಪಳಿಸಿದೆ. ನಿನ್ನೆ ರಾತ್ರಿ ಮಚಲಿಪಟ್ಟಣಂ ಮತ್ತು ಕಳಿಂಗಪಟ್ಟಣಂ ನಡುವಿನಿಂದ ಚಂಡಮಾರುತ ಗಂಟೆಗೆ ೯೦ ರಿಂದ ೧೦೦ ಕಿಲೋಮೀಟರ್ ವೇಗದ ಗಾಳಿಯೊಂದಿಗೆ ಆಂಧ್ರಪ್ರದೇಶ ಮತ್ತು ಯಾನಂ ಕರಾವಳಿಯನ್ನು ದಾಟಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.  ಈ ಚಂಡಮಾರುತವು ಆಂಧ್ರಪ್ರದೇಶದಲ್ಲಿ ಅತಿ ಹೆಚ್ಚು ಮಳೆಗೆ ಕಾರಣವಾಗಿದ್ದು, ರಾಜ್ಯದಲ್ಲಿ ೪೩ ಸಾವಿರ ಹೆಕ್ಟೇರ್ ಬೆಳೆಗಳಿಗೆ ಹಾನಿಯಾಗಿದೆ. ಆಂಧ್ರಪ್ರದೇಶ ಮತ್ತು ಯಾನಂನ ಹೆಚ್ಚಿನ ಸ್ಥಳಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ ಮತ್ತು ಕೆಲವು ಸ್ಥಳಗಳಲ್ಲಿ ಇಂದು ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಚಂಡಮಾರುತದ ಪ್ರಭಾವದಿಂದ, ಆಂಧ್ರದ ನೆಲ್ಲೂರು ಜಿಲ್ಲೆಯಲ್ಲಿ ನಿನ್ನೆ ಅತಿ ಹೆಚ್ಚು ಮಳೆಯಾಗಿದೆ. ಈ ನಡುವೆ, ಒಡಿಶಾದಲ್ಲಿ, ಕೆಲವು ಪ್ರದೇಶಗಳಲ್ಲಿ ಸಣ್ಣಪುಟ್ಟ ಭೂಕುಸಿತಗಳು ಮತ್ತು ಮರಗಳು ಉರುಳಿದ ವರದಿಗಳು ಬಂದಿವೆ. ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ನಿಯಂತ್ರಣ ಕೊಠಡಿಯಲ್ಲಿ ಭೂಕುಸಿತದ ನಂತರದ ಪರಿಸ್ಥಿತಿಯನ್ನು ಪರಿಶೀಲಿಸುತ್ತಾ, ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ, ಮೊಂಥಾದಿಂದ ಆಗಬಹುದಾಗಿ

ದೊಡ್ಡ ಹಾನಿಯಿಂದ ಒಡಿಶಾ ತಪ್ಪಿಸಿಕೊಂಡಿದೆ ಎಂದಿದ್ದಾರೆ. ಚಂಡಮಾರುತದ ಹಿನ್ನೆಲೆಯಲ್ಲಿ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಎನ್‌ಡಿಆರ್‌ಎಫ್ ೨೮ ತಂಡಗಳನ್ನು ನಿಯೋಜಿಸಿದ್ದು, ಅವುಗಳಲ್ಲಿ ೧೨ ತಂಡಗಳು ಆಂಧ್ರಪ್ರದೇಶದಲ್ಲಿ, ಆರು ಒಡಿಶಾದಲ್ಲಿ ಮತ್ತು ಮೂರು ಉತ್ತರ ತಮಿಳುನಾಡಿನಲ್ಲಿವೆ. ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು, ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಹಾಗೂ ಸಂಬಂಧಪಟ್ಟ ರೈಲ್ವೆ ಅಧಿಕಾರಿಗಳೊಂದಿಗೆ ಮಾತನಾಡಿ, ಎರಡೂ ರಾಜ್ಯಗಳಲ್ಲಿ ಮೊಂಥಾ ಚಂಡಮಾರುತ ಅಪ್ಪಳಿಸಿದ ನಂತರ ತಕ್ಷಣದ ಪುನಃಸ್ಥಾಪನೆ ಕಾರ್ಯಗಳ ಕುರಿತು ಮಾತನಾಡಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಚಂಡಮಾರುತದ ದೃಷ್ಟಿಯಿಂದ, ವಿಭಾಗೀಯ, ವಲಯ ಮತ್ತು ಮಂಡಳಿ ಮಟ್ಟದಲ್ಲಿ ವಾರ್ ರೂಮ್‌ಗಳನ್ನು ಸಕ್ರಿಯಗೊಳಿಸಲಾಗಿದೆ. ಪೂರ್ವ ಕರಾವಳಿ ವಿಭಾಗಗಳಲ್ಲಿ ಅಗತ್ಯ ಸಂಪನ್ಮೂಲಗಳನ್ನು ಇರಿಸಲಾಗಿದೆ ಎಂದು ಹೇಳಿದರು. ವಿಜಯವಾಡ, ವಿಶಾಖಪಟ್ಟಣಂ ಮತ್ತು ಗುಂಟೂರಿನಲ್ಲಿ ರೈಲ್ವೆ ತಂಡಗಳು ಜಾಗರೂಕವಾಗಿವೆ ಮತ್ತು ರೈಲು ಕಾರ್ಯಾಚರಣೆಯಲ್ಲಿ ಅಡಚಣೆಗಳನ್ನು ಕಡಿಮೆ ಮಾಡಲು ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

**********

ಒಡಿಶಾದಲ್ಲಿಂದು ಅತಿ ಹೆಚ್ಚು ಮಳೆಯಾಗುವ ಸಾಧ್ಯತೆ ಇದೆ ಎಂದಿರುವ ಭಾರತೀಯ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಣೆ ಮಾಡಿದೆ. ಮುಂದಿನ ಎರಡು ಮೂರು ದಿನಗಳವರೆಗೆ ಆಂಧ್ರಪ್ರದೇಶ, ತೆಲಂಗಾಣ, ಛತ್ತೀಸ್‌ಗಢ, ಗಂಗಾನದಿಯ ಪಶ್ಚಿಮ ಬಂಗಾಳ, ಕೇರಳ ಮತ್ತು ಮಾಹೆಯಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದೆ. ಸೌರಾಷ್ಟ್ರ, ಕಚ್, ವಿದರ್ಭ, ಗುಜರಾತ್, ಬಿಹಾರ, ಜಾರ್ಖಂಡ್, ಕೊಂಕಣ, ಗೋವಾ, ಮಧ್ಯ ಮಹಾರಾಷ್ಟ್ರ, ಮಧ್ಯಪ್ರದೇಶ ಮತ್ತು ಮರಾಠವಾಡದಲ್ಲೂ ಇದೇ ರೀತಿಯ ಪರಿಸ್ಥಿತಿ ಇರಲಿದೆ. ಲಕ್ಷದ್ವೀಪ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಕರ್ನಾಟಕದ ಕರಾವಳಿ ಮತ್ತು ಉತ್ತರ ಒಳನಾಡು, ಪೂರ್ವ ರಾಜಸ್ಥಾನ, ಪೂರ್ವ ಉತ್ತರ ಪ್ರದೇಶ ಮತ್ತು ಈಶಾನ್ಯ ಪ್ರದೇಶದಲ್ಲಿ ಈ ತಿಂಗಳ ೩೧ ರವರೆಗೆ ಗುಡುಗು ಸಹಿತ ಮಳೆ ಮತ್ತು ಬಿರುಗಾಳಿ ಬೀಸುವ ಮುನ್ಸೂಚನೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ನಡುವೆ ಇತ್ತೀಚಿನ ವರದಿಯಂತೆ ಮೊಂತಾ ಚಂಡಮಾರುತ ಆಂಧ್ರಪ್ರದೇಶದ ಕರಾವಳಿಯಲ್ಲಿ ಸಲ್ಪಮಟ್ಟಿಗೆ ದುರ್ಬಲಗೊಂಡಿದೆ. ಕರಾವಳಿಯ ವಾಯುವ್ಯ ದಿಕ್ಕಿಗೆ ಚಲಿಸುವ ಸಾಧ್ಯತೆಯಿದ್ದು, ಮುಂದಿನ ೬ ಗಂಟೆಗಳಲ್ಲಿ ತೀವ್ರತೆ ಕಾಯ್ದುಕೊಳ್ಳುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

**********

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಹರಿಯಾಣದ ಅಂಬಾಲಕ್ಕೆ ಭೇಟಿ ನೀಡಲಿದ್ದು, ಅಲ್ಲಿ ಅವರು ಅಂಬಾಲ ವಾಯುಪಡೆ ನಿಲ್ದಾಣದಲ್ಲಿ ರಫೇಲ್ ಯುದ್ಧ ವಿಮಾನದಲ್ಲಿ ಹಾರಾಟ ನಡೆಸಲಿದ್ದಾರೆ. ಭಾರತೀಯ ನೌಕಾಪಡೆ ಮತ್ತು ವಾಯುಪಡೆಯ ಆದೇಶವನ್ನು ಗಮನದಲ್ಲಿಟ್ಟುಕೊಂಡು ಫ್ರಾನ್ಸ್‌ನ ಡಸಾಲ್ಟ್ ಏವಿಯೇಷನ್ ಸಂಸ್ಥೆ ಭಾರತದಲ್ಲಿ ರಫೇಲ್ ಜೋಡನಾ ಸೌಲಭ್ಯ ನಿರ್ಮಿಸಲು ಯೋಜನೆ ರೂಪಿಸಿರುವ ಕುರಿತು ಐಎಎನ್‌ಎಸ್ ವರದಿ ಮಾಡಿತ್ತು. ರಾಷ್ಟ್ರಪತಿ ದ್ರೌಪದಿ ಮುರ್ಮು ಕಳೆದ ಬಾರಿ ಏಪ್ರಿಲ್ ೨೦೨೩ ರಲ್ಲಿ ಅಸ್ಸಾಂನ ತೇಜ್‌ಪುರ ವಾಯುಪಡೆ ನಿಲ್ದಾಣದಲ್ಲಿ ಸುಖೋಯ್ ೩೦ ಎಂಕೆಐ ಯುದ್ಧ ವಿಮಾನದಲ್ಲಿ ಹಾರಾಟ ನಡೆಸಿದ್ದರು.

**********

ಪ್ರಧಾನಿ ನರೇಂದ್ರ ಮೋದಿ ಮುಂಬೈನಲ್ಲಿ ಇಂದು ನಡೆಯುವ ಕಡಲ ನಾಯಕರ ಸಮಾವೇಶವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ಸಂದರ್ಭದಲ್ಲಿ, ಅವರು ಭಾರತ ಕಡಲ ಸಪ್ತಾಹ ೨೦೨೫ರ ಭಾಗವಾಗಿ ಜಾಗತಿಕ ಕಡಲ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ವೇದಿಕೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರಧಾನ ಮಂತ್ರಿಯವರ ಭಾಗವಹಿಸುವಿಕೆಯು ಕಡಲ ಅಮೃತ ಕಾಲ ದೃಷ್ಟಿಕೋನ ೨೦೪೭ ರೊಂದಿಗೆ ಹೊಂದಿಕೆಯಾಗುತ್ತಿದ್ದು, ಮಹತ್ವಾಕಾಂಕ್ಷೆಯ, ಭವಿ?-ಆಧಾರಿತ ಕಡಲ ಪರಿವರ್ತನೆಗೆ ಅವರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಈ ಕಾರ್ಯಕ್ರಮವು ಹಡಗು ಸಾಗಣೆ, ಬಂದರುಗಳು, ಹಡಗು ನಿರ್ಮಾಣ, ಹಡಗು ಪ್ರವಾಸೋದ್ಯಮ ಮತ್ತು ಕಡಲ ಆರ್ಥಿಕ ಹಣಕಾಸು ಕ್ಷೇತ್ರದಲ್ಲಿ ಪ್ರಮುಖ ಪಾಲುದಾರರನ್ನು ಒಟ್ಟುಗೂಡಿಸುವ ಪ್ರಮುಖ ಜಾಗತಿಕ ವೇದಿಕೆಯಾಗಿದೆ. ಈ ಕಾರ್ಯಕ್ರಮದಲ್ಲಿ  ೮೫ ಕ್ಕೂ ಹೆಚ್ಚು ರಾಷ್ಟ್ರಗಳ ಒಂದು ಲಕ್ಷಕ್ಕೂ ಹೆಚ್ಚು ಪ್ರತಿನಿಧಿಗಳು ಮತ್ತು ೩೫೦ಕ್ಕೂ ಹೆಚ್ಚು ಅಂತಾರಾಷ್ಟ್ರೀಯ ಭಾ?ಣಕಾರರು ಭಾಗವಹಿಸಲಿದ್ದಾರೆ.

**********

ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ ಜಿ.ಕಿಶನ್ ರೆಡ್ಡಿ ಇಂದು ನವದೆಹಲಿಯಲ್ಲಿ 'ಕೊಯ್ಲ-ಶಕ್ತಿ' ಎಂಬ ಸ್ಮಾರ್ಟ್ ಕಲ್ಲಿದ್ದಲು ವಿಶ್ಲೇಷಣಾ ಡ್ಯಾಶ್‌ಬೋರ್ಡ್‌ಗೆ ಚಾಲನೆ ನೀಡಲಿದ್ದಾರೆ.  ಕಲ್ಲಿದ್ದಲು ವಲಯದ ಕಾರ್ಯಾಚರಣೆಗಳ ನೈಜ-ಸಮಯದ ಮೇಲ್ವಿಚಾರಣೆ ಮತ್ತು ವಿಶ್ಲೇಷಣೆಗಾಗಿ ಡ್ಯಾಶ್‌ಬೋರ್ಡ್ ಏಕೀಕೃತ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ.  ಡ್ಯಾಶ್‌ಬೋರ್ಡ್-ಕಲ್ಲಿದ್ದಲು ಉತ್ಪಾದನೆ, ಬೇಡಿಕೆ, ಲಾಜಿಸ್ಟಿಕ್ಸ್ ಮತ್ತು ರವಾನೆಗೆ ಸಂಬಂಧಿಸಿದ ಮಾಹಿತಿಯನ್ನು ಸಂಯೋಜಿಸುತ್ತದೆ ಮತ್ತು ವಿಶ್ಲೇಷಿಸುತ್ತದೆ. ವಲಯದಾದ್ಯಂತ ಕಾರ್ಯಾಚರಣೆಯ ಪಾರದರ್ಶಕತೆ ಮತ್ತು ದಕ್ಷತೆಯನ್ನು ಬಲಪಡಿಸುತ್ತದೆ ಎಂದು ಕಲ್ಲಿದ್ದಲು ಸಚಿವಾಲಯ ತಿಳಿಸಿದೆ.

**********

ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದವನ್ನು ಮುನ್ನಡೆಸಲು ಐರೋಪ್ಯ ಒಕ್ಕೂಟದ ವ್ಯಾಪಾರ ಮತ್ತು ಆರ್ಥಿಕ ಭದ್ರತಾ ಆಯುಕ್ತ ಮಾರೋಸ್ ಸೆಫ್ಕೊವಿಕ್ ಅವರೊಂದಿಗೆ ವಿವರವಾದ ಚರ್ಚೆಗಳನ್ನು ನಡೆಸಿದ ನಂತರ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ನಿನ್ನೆ ತಮ್ಮ ಬ್ರುಸೆಲ್ಸ್ ಪ್ರವಾಸವನ್ನು ಸಂಪನ್ನಗೊಳಿಸಿದ್ದಾರೆ. ಹೆಚ್ಚು ಉತ್ಪಾದಕವಾಗಿದ್ದ ಮಾತುಕತೆಗಳು ಅನೇಕ ಬಾಕಿ ಇರುವ ಸಮಸ್ಯೆಗಳನ್ನು ಪರಿಹರಿಸಲು ಸಹಾಯ ಮಾಡಿದೆ ಎಂದು ಸಚಿವ ಗೋಯಲ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಮಾತುಕತೆಗಳು ಬೆಳವಣಿಗೆಯ ಸಾಮರ್ಥ್ಯವನ್ನು ಹೆಚ್ಚಿಸುವ ಜೊತೆಗೆ ಉಭಯ ರಾಷ್ಟ್ರಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುತ್ತವೆ ಎಂದು ಹೇಳಿದ್ದಾರೆ.

**********

ಕೇಂದ್ರದ ೮ನೇ ವೇತನ ಆಯೋಗದ ಉಲ್ಲೇಖಿತ ನಿಯಮಗಳನ್ನು ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಅನುಮೋದಿಸಿದೆ. ನವದೆಹಲಿಯಲ್ಲಿ ನಿನ್ನೆ ನಡೆದ ಸಚಿವ ಸಂಪುಟ ಸಭೆಯ ನಂತರ ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಆಯೋಗ ರಚನೆಯಾದ ದಿನಾಂಕದಿಂದ ೧೮ ತಿಂಗಳೊಳಗೆ ತನ್ನ ಶಿಫಾರಸುಗಳನ್ನು ಮಾಡುತ್ತದೆ. ಆಯೋಗವು ಒಬ್ಬ ಅಧ್ಯಕ್ಷ, ಒಬ್ಬ ಅರೆಕಾಲಿಕ ಸದಸ್ಯ ಮತ್ತು ಒಬ್ಬ ಸದಸ್ಯ ಕಾರ್ಯದರ್ಶಿಯನ್ನು ಒಳಗೊಂಡಿರುತ್ತದೆ ಎಂದು ತಿಳಿಸಿದರು. ೨೦೨೫-೨೬ ರ ಹಿಂಗಾರು ಋತುವಿನಲ್ಲಿ ಫಾಸ್ಫೇಟ್ ಮತ್ತು ಪೊಟ್ಯಾಸಿಕ್ ರಸಗೊಬ್ಬರಗಳ ಮೇಲಿನ ಪೌಷ್ಟಿಕಾಂಶ ಆಧಾರಿತ ಸಬ್ಸಿಡಿ ದರಗಳನ್ನು ಸಹ ಸಂಪುಟ ಅನುಮೋದಿಸಿದೆ. ೨೦೨೫ ರ ಹಿಂಗಾರಿಗೆ ಸುಮಾರು ೩೭ ಸಾವಿರ ೯೫೨ ಕೋಟಿ ರೂಪಾಯಿಗಳ ಸಬ್ಸಿಡಿಯನ್ನು ಸಚಿವ ಸಂಪುಟ ಅನುಮೋದಿಸಿದೆ ಮತ್ತು ದರಗಳು ಅಕ್ಟೋಬರ್ ೧ ರಿಂದ ಅನ್ವಯವಾಗುತ್ತವೆ ಎಂದು ಅವರು ಮಾಹಿತಿ ನೀಡಿದರು. ಈ ಉಪಕ್ರಮವು ರೈತರಿಗೆ ಸಬ್ಸಿಡಿ, ಕೈಗೆಟುಕುವ ಮತ್ತು ಸಮಂಜಸ ಬೆಲೆಯಲ್ಲಿ ರಸಗೊಬ್ಬರಗಳ ಲಭ್ಯತೆಯನ್ನು ಖಚಿತಪಡಿಸುತ್ತದೆ ಎಂದು ಸಚಿವರು ಹೇಳಿದರು.

**********

ದೇಶಾದ್ಯಂತ ರೈತರ ಕಲ್ಯಾಣಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ೨೦೨೫-೨೬ ರ ಹಿಂಗಾರು ಋತುವಿನಲ್ಲಿ ರಂಜಕ ಮತ್ತು ಪೊಟ್ಯಾಶ್ ರಸಗೊಬ್ಬರಗಳ ಮೇಲಿನ ಸಬ್ಸಿಡಿಗಳನ್ನು ಅನುಮೋದಿಸುವ ಮೂಲಕ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಇದು ಆಹಾರ ಪೂರೈಕೆದಾರರಿಗೆ ಕೈಗೆಟುಕುವ ದರದಲ್ಲಿ ರಸಗೊಬ್ಬರಗಳು ಲಭ್ಯವಾಗುವಂತೆ ಮಾಡುವುದಲ್ಲದೆ, ಅವರ ಆದಾಯವನ್ನು ಹೆಚ್ಚಿಸುತ್ತದೆ ಎಂದಿದ್ದಾರೆ.

**********

ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ೫ ಪಂದ್ಯಗಳ ಟಿ೨೦ ಕ್ರಿಕೆಟ್ ಸರಣಿಯ ಮೊದಲ ಪಂದ್ಯ ಕ್ಯಾನ್‌ಬೆರಾದಲ್ಲಿಂದು ನಡೆಯಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೧:೪೫ ಕ್ಕೆ ಪ್ರಾರಂಭವಾಗಲಿದೆ. ಐಸಿಸಿ ಅಂತಾರಾಷ್ಟ್ರೀಯ ಟಿ೨೦ ಶ್ರೇಯಾಂಕದಲ್ಲಿ ಮೊದಲೆರಡು ತಂಡಗಳಾಗಿರುವ ಭಾರತ ಮತ್ತು ಆಸ್ಟ್ರೇಲಿಯಾ ೨೦೨೬ರ ಫೆಬ್ರವರಿ-ಮಾರ್ಚ್‌ನಲ್ಲಿ ನಡೆಯಲಿರುವ ಟಿ-೨೦ ವಿಶ್ವಕಪ್‌ಗೆ ಸಿದ್ಧತೆಯ ಭಾಗವಾಗಿ ಈ ಅಂತಾರಾಷ್ಟ್ರೀಯ ಟಿ೨೦ ಸರಣಿ ಉಭಯ ತಂಡಗಳಿಗೂ ಮಹತ್ವದ್ದಾಗಿದೆ.

**********